**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಶಹಾಬಾದ**

**CC.No. 293 /2023**

**CW : 01 PW: 01**

**ಸಾಕ್ಷಿಯನ್ನು ಪ್ರಮಾಣೀಕರಿಸಿದ ದಿನಾಂಕ : 30/07/2026**

| | |
|---|---|
| ಹೆಸರು | : ರೇಷ್ಮಾ |
| ತಂದೆಯ ಹೆಸರು | : ಫಯಾಜ್ ಮಜೀದ ವಾಲೆ |
| ವಯಸ್ಸು | : 20 |
| ಉದ್ಯೋಗ | : ಒಕ್ಕಲುತನ |
| ವಾಸಸ್ಥಳ | : ಮರತೂರು ಗ್ರಾಮ |

ಮುಖ್ಯ ವಿಚಾರಣೆ : **ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ನನಗೆ ಚಾಸಾ-4 ಮತ್ತು 5 ರವರ ಪರಿಚಯ ಇದೆ. ಚಾಸಾ-6 ರಿಂದ 13 ರವರ ಪರಿಚಯ ಇಲ್ಲ. ಆರೋಪಿಯು ನನ್ನ ಅಣ್ಣ, ಆರೋಪಿತರ ಪರಿಚಯ ಇದೆ. ಮೃತ ಫಯಾಜ್ ನನ್ನ ಗಂಡ.

ನನಗೆ ಅಪಘಾತ ಹೇಗೆ ಮತ್ತು ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೋತಿಲ್ಲ. ಅಪಘಾತ ಎಲ್ಲಿ ಆಗಿರುತ್ತದೆ ಎಂದು ನನಗೆ ಗೋತ್ತಿಲ್ಲ. ನಾನು ಅಪಘಾತದ ವಿಚಾರಿವಾಗಿ ಆಸ್ಪತ್ರೆಗೆ ಹೋದಾಗ ಪೋಲಿಸರು ಒಂದು ದಾಖಲೆಗೆ ಸಹಿ ಪಡೆದಿರುತ್ತಾರೆ . ಇದನ್ನು ಹೋರತುಪಡಿಸಿ ಬೇರೆ ಏನು ಗೊತ್ತಿಲ್ಲ. ಸಾಕ್ಷಿಯು ಹೇಳಿಕೆಯ ದೂರಿನ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದು, ಹೇಳಿಕೆ ದೂರನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1 ಎ ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿ ಬರೆದ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ . ನಾನು ಪೋಲಿಸರ ಮುಂದೆ ನನ್ನ ಪುರವಣಿ ಹಾಳಿಕೆಯನ್ನು ನೀಡಿರುವುದಿಲ್ಲ. ನಾನು ಪೋಲಿಸರಿಗೆ ಘಟನಾ ಸ್ಥಳವನ್ನು ತೋರಿಸಿರುವುದಿಲ್ಲ. ಸಾಕ್ಷಿಯು ಒಂದು ಪೋಟೊವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ನಿಪಿ-2 ನ್ನು ಏತಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲು : ಸಹಾಯಕ ಸರ್ಕಾರಿ ಅಭಿಯೋಜಕರಿಂದ</u>**

ದಿನಾಂಕ 17-05-2023 ರಂದು ಸಂಜೆ 5.30 ಗಂಟೆಗೆ ಶಹಾಬದ ಮರುತೂರು ಮುಖ್ಯ ರಸ್ತೆ ತರನಳ್ಳಿ ಸಿಮಾಂತರದ ಶೀವಕುಮಾರ ಪೂಜಾರಿ ರವರ ಹೋಲದ ಹತ್ತಿರ ರಸ್ತೆಯ ಮೇಲೆ ಮೃತ ನನ್ನ ಗಂಡ ಮೋಟಾರ್ ಸೈಕಲ್ ಸಂಖ್ಯೆ ಕೆಎ-53 ಇಜೆ-4831 ನೇದ್ದರ ಮೇಲೆ ಚಿತ್ತಾಪೂರದಿಂದ ಮರತೂರ ಗ್ರಾಮಕ್ಕೆ ಹೋಗುತ್ತಿದ್ದಾಗ ಕಾರ ಸಂಖ್ಯೆ ಕೆಎ-32, Z 4016 ನೇದ್ದನ್ನು ಅತಿವೇಗ ಮತ್ತು ನಿರ್ಲಕ್ಷತನದಿಂದ ಚಲಾಯಿಸಿಕೊಂಡು ಬಂದು ನನ್ನ ಗಂಡನ ವಾಹನಕ್ಕೆ ಡಿಕ್ಕಿ ಪಡಿಸಿದ ಪರಿಣಾಮ ಅವರಿಗೆ ಬಾರಿ ಪೆಟ್ಟಾಗಿ ದಿಃ 17-05-2023 ರಿಂದ 09-06-2023 ರವರೆಗೆ ಕಲಬುರಗಿಯ ಮಣ್ಣೂರ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಮರಳಿ ಮನೆಗೆ ಬಂದಾಗ ದಿಃ 17-06-2023 ರಂದು ಕಲಬುರಗಿಯ ಜಿಲ್ಲಾ ಆಸ್ಪತ್ರೆಗೆ ಸೇರಿಕೆ ಮಾಡಿದಾಗ ದಿಃ 19-06-2023 ರಂದು ಮಧ್ಯಾಹ್ನ 12.32 ಗಂಟೆಗೆ ಆಸ್ಪತ್ರೆಯಲ್ಲಿ ಮೃತ ಪಟ್ಟಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿಯು ಮುುಂದುವರೆದು ನನ್ನ ಗಂಡ ಮೃತರಾಗಿರುತ್ತಾರೆ, ಅಪಘಾತಕ್ಕೆ ಯಾರು ಕಾರಣ ಎಂದು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಇದೇ ವಿಚಾರಿವಾಗಿ ನಾನು ನಿಪಿ-1 ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ. ನಂತರ ದಿಃ 19-05-2023 ರಂದು ಪೋಲಿಸರಿಗೆ ಘಟನಾ ಸ್ಥಳವನ್ನು ತೋರಿಸಿ, ಈಗ ಓದಿ ಹೇಳಿದಂತೆ ನನ್ನ ಮರು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಮರು ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ನಿಪಿ-1 ರಿಂದ 3 ರಲ್ಲಿರುವ ವಿಚಾರಗಳು ನನಗೆ ಗೋತ್ತಿದ್ದರು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ</u>**

ಈ ಹಂತದಲ್ಲಿ ಆರೋಪಿ ಪರ ವಕೀಲರು ಪಾಟೀ ಸವಾಲು ಏನೂ ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ : ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ ಇದೆ.**

**ಪ್ರ.ದ.ನ್ಯಾ.ದಂ.ಗಳು, ಶಹಾಬಾದ**